ದಿ: ೨೫.೦೩.೨೦೨೪ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಂದಿನ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆ:** ಅರ್ಜಿದಾರ ಪರ ಶ್ರೀ ಕೆ.ವಿ.ಹೆಚ್. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ. ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ದಿ: ೧೦.೧೧.೨೦೧೯ ರಂದು ಆಗಿರುವ ೧೧ ತಿಂಗಳಿನ ಗ್ರಾಂಟ್ ಅಗ್ರಿಮೆಂಟ್ ಅನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧ ಎಂದು ಗುರುತಿಸಲಾಯಿತು. ನನ್ನ ಮಕ್ಕಳಾದ ವೈಭವ್ ಮತ್ತು ಸೃಜನ್ ಶಾಲಾ ಶುಲ್ಕ ರಸೀದಿಗಳನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೨ ರಿಂದ ೭ ಎಂದು ಗುರುತಿಸಲಾಯಿತು. ನನ್ನ ಮಕ್ಕಳ ವೈದ್ಯಕೀಯ ಚಿಕಿತ್ಸ ದಾಖಲೆಗಳನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೮ ರಿಂದ ೧೦ ಎಂದು ಗುರುತಿಸಲಾಯಿತು. ನನ್ನ ಹಾಗೂ ನನ್ನ ಮಕ್ಕಳ ಆಧಾರ ಗುರುತಿನ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೧ ರಿಂದ ೧೩ ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**